ಸದನದಲ್ಲಿ ಉತ್ತರಿಸುವ ಪ್ರಶ್ನೆ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಗುರುವಾರ, ದಿನಾಂಕ: 18ನೇ ಜುಲೈ, 2019

ಕೊಳವೆ ಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

49 (560) ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ-

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಕಳೆದ ಮೂರು ವರ್ಷಗಳಿಂದ ಗಂಗಾ ಕಲ್ಯಾಣ ಯೋಜನೆಯಡಿಯಲ್ಲಿ ಕೊಳವೆ ಬಾವಿ ಕೊರೆದು ವಿದ್ಯುತ್ ಸಂಪರ್ಕ ಕಲ್ಪಿಸಲು ಬಂದಂತಹ ಅರ್ಜಿಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಫಲಾನುಭವಿಗಳ ಮಾಹಿತಿ ನೀಡುವುದು)

(ಆ) ಈ ಪೈಕಿ ಎಷ್ಟು ಕೊಳವೆ ಬಾವಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ ; ಬಾಕಿಯಿರುವ ಕೊಳವೆ ಬಾವಿಗಳ ಸಂಖ್ಯೆ ಎಷ್ಟು ; ಈ ಕೊಳವೆ ಬಾವಿಗಳಿಗೆ ಯಾವಾಗ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

(ಇ) ಮಂಡ್ಯ ಜಿಲ್ಲಾ ವ್ಯಾಪ್ತಿಯಲ್ಲಿ ಈ ಕಾಮಗಾರಿಗೆ ಗುತ್ತಿಗೆ ಪಡೆದ ಗುತ್ತಿಗೆದಾರರು ನಿಗಧಿತ ಅವಧಿಯೊಳಗೆ ಕಾಮಗಾರಿ ಪೂರೈಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಅಂತಹ ಪ್ರಕರಣಗಳಿಗೆ ಪ್ರತ್ಯೇಕವಾಗಿ ಯಾವ ವ್ಯವಸ್ಥೆ ಕಲ್ಪಿಸಲಾಗಿದೆ ; ಉಳಿಕೆ ರೈತ ಫಲಾನುಭವಿಗಳಿಗೆ ಯಾವ ಕಾಲಮಿತಿಯಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲಾಗುವುದು ?